Akashvani : Bangalore

National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

12.02.2025 7.35 am

<><*<><>*><>

ಮುಖ್ಯಾಂಶಗಳು

- **ಪ್ರಧಾನಿ ನರೇಂದ್ರ ಮೋದಿ, ಫ್ರಾನ್ಸ್ ಅಧ್ಯಕ್ಷ ಇಮ್ಯಾನುಯೆಲ್ ಮ್ಯಾಕ್ರಾನ್ ಅವರಿಂದ ಉಭಯ ದೇಶಗಳ ವ್ಯಾಪಾರ ಸಂಬಂಧ, ನಾವೀನ್ಯತೆ ಉತ್ತೇಜಿಸುವ ಬದ್ಧತೆ ಪುನರುಚ್ಚಾರ**
- **ದೇಶದ ನಿವ್ವಳ ನೇರ ತೆರಿಗೆ ಸಂಗ್ರಹ ಶೇಕಡ ೧೪.೬೯ ರಷ್ಟು ಬೆಳವಣಿಗೆ**
- **ಭಾರತದಲ್ಲಿ ಲ್ಯಾಮ್ ರಿಸರ್ಚ್‌ನಿಂದ ೧೦ ಸಾವಿರ ಕೋಟಿ ರೂಪಾಯಿ ಹೂಡಿಕೆ**
- **ದೇಶದಲ್ಲಿಯೇ ಕರ್ನಾಟಕ ಹೂಡಿಕೆದಾರರ ಪ್ರಶಸ್ತ್ಯ ತಾಣ - ಮುಖ್ಯಮಂತ್ರಿ ಸಿದ್ದರಾಮಯ್ಯ**
- **ಅಹಮದಾಬಾದ್ ನಲ್ಲಿ ಇಂದು ಭಾರತ - ಇಂಗ್ಲೆಂಡ್ ನಡುವಿನ ಮೂರನೇ ಹಾಗೂ ಅಂತಿಮ ಏಕದಿನ ಪಂದ್ಯ**

<><*<><>*><>

ಪ್ರಧಾನಿ ನರೇಂದ್ರ ಮೋದಿ ಮತ್ತು ಫ್ರಾನ್ಸ್ ಅಧ್ಯಕ್ಷ ಇಮ್ಯಾನುಯೆಲ್ ಮ್ಯಾಕ್ರೋನ್ ಅವರು ವ್ಯಾಪಾರ ಸಂಬಂಧಗಳನ್ನು ಬಲಪಡಿಸುವ ಮತ್ತು ನಾವೀನ್ಯತೆಯನ್ನು ಉತ್ತೇಜಿಸುವ ಬದ್ಧತೆಯನ್ನು ಪುನರುಚ್ಚರಿಸಿದ್ದಾರೆ. ನಿನ್ನೆ ಸಂಜೆ ಪ್ಯಾರಿಸ್ ನಲ್ಲಿ ನಡೆದ ೧೪ ನೇ ಭಾರತ-ಫ್ರಾನ್ಸ್ ಸಿಇಒಗಳ ವೇದಿಕೆಯನ್ನುದ್ದೇಶಿಸಿ ಮಾತನಾಡಿದರು. ಈ ವೇದಿಕೆಯು ರಕ್ಷಣಾ, ಏರೋಸ್ಪೇಸ್, ಕೃತಕ ಬುದ್ಧಿಮತ್ತೆ, ಮೂಲಸೌಕರ್ಯ ಮತ್ತು ಸುಸ್ಥಿರ ಅಭಿವೃದ್ಧಿಯಂತಹ ಪ್ರಮುಖ ಕ್ಷೇತ್ರಗಳ ಮೇಲೆ ಕೇಂದ್ರೀಕರಿಸಿ ಎರಡೂ ದೇಶಗಳ ಉನ್ನತ ಉದ್ಯಮ ನಾಯಕರನ್ನು ಒಟ್ಟುಗೂಡಿಸಿತು.

**ಧ್ವನಿ: ಪ್ರಧಾನಿ ನರೇಂದ್ರ ಮೋದಿ**

ಪ್ರಧಾನಿ ನರೇಂದ್ರ ಮೋದಿ ತಮ್ಮ ಭಾಷಣದಲ್ಲಿ, ಜಾಗತಿಕ ಹೂಡಿಕೆ ಕೇಂದ್ರವಾಗಿ ಭಾರತದ ಹೆಚ್ಚುತ್ತಿರುವ ಆಕರ್ಷಣೆಯನ್ನು ಬಿಂಬಿಸಿದರು, ಅದರ ಸ್ಥಿರ ನೀತಿಗಳು ಮತ್ತು ಇತ್ತೀಚಿನ ಆರ್ಥಿಕ ಸುಧಾರಣೆಗಳಿಗೆ ಒತ್ತು ನೀಡಿದರು. ವಿಮಾ ವಲಯವನ್ನು ಶೇಕಡ ೧೦೦ ರಷ್ಟು ಎಫ್ ಡಿಐಗೆ ತೆರೆಯುವುದು, ನಾಗರಿಕ ಪರಮಾಣು ಶಕ್ತಿಯಲ್ಲಿ ಖಾಸಗಿ ಭಾಗವಹಿಸುವಿಕೆಗೆ ಅವಕಾಶ ನೀಡುವುದು ಮತ್ತು ವ್ಯಾಪಾರವನ್ನು ಸುಲಭಗೊಳಿಸಲು ತೆರಿಗೆ ರಚನೆಗಳನ್ನು ಸರಳೀಕರಿಸುವ

ಬಗ್ಗೆ ಅವರು ಮಾತನಾಡಿದರು. ನಿಯಂತ್ರಕ ಸುಧಾರಣೆಗಳು ಭಾರತದ ಆರ್ಥಿಕ ಆಡಳಿತವನ್ನು ಹೆಚ್ಚು ವಿಶ್ವಾಸ ಆಧಾರಿತ ಮತ್ತು ಪರಿಣಾಮಕಾರಿಯನ್ನಾಗಿ ಮಾಡುತ್ತಿವೆ ಎಂದು ಇದೇ ವೇಳೆ ಅವರು ಗಮನಸೆಳೆದರು. ರಕ್ಷಣೆ, ಇಂಧನ, ವಾಯುಯಾನ, ಬಾಹ್ಯಾಕಾಶ, ಫಿನ್ಟೆಕ್ ಮತ್ತು ಆರೋಗ್ಯ ರಕ್ಷಣೆಯಂತಹ ಕ್ಷೇತ್ರಗಳಲ್ಲಿ ಹೊಸ ಹೂಡಿಕೆ ಅವಕಾಶಗಳನ್ನು ಅನ್ವೇಷಿಸಲು ಪ್ರಧಾನಿ ಫ್ರಾನ್ಸ್ ಕಂಪನಿಗಳಿಗೆ ಆಹ್ವಾನ ನೀಡಿದರು. ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಅವರು ವೇದಿಕೆಯನ್ನುದ್ದೇಶಿಸಿ ಮಾತನಾಡುತ್ತಾ, ಎಐ ಮತ್ತು ನಾವೀನ್ಯತೆಗೆ ಜಾಗತಿಕ, ಅಂತರ್ಗತ ವಿಧಾನದ ಮಹತ್ವವನ್ನು ಒತ್ತಿ ಹೇಳಿದರು.

<><*<><>*><>

ಪ್ಯಾರಿಸ್ ನಲ್ಲಿ ಉನ್ನತ ಮಟ್ಟದ ಮಾತುಕತೆಗಳ ಸರಣಿಯ ನಂತರ, ಪ್ರಧಾನಿ ನರೇಂದ್ರ ಮೋದಿ ಅವರು ಫ್ರಾನ್ಸ್ ಅಧ್ಯಕ್ಷ ಇಮ್ಯಾನುಯೆಲ್ ಮ್ಯಾಕ್ರೋನ್ ಅವರೊಂದಿಗೆ ಮಾರ್ಸಿಲೆಗೆ ಆಗಮಿಸಿದ್ದಾರೆ. ಮಾರ್ಸಿಲೆಯಲ್ಲಿರುವ ಭಾರತೀಯ ಸಮುದಾಯ ಪ್ರಧಾನಮಂತ್ರಿ ಅವರಿಗೆ ಆತ್ಮೀಯ ಮತ್ತು ಉತ್ಸಾಹಭರಿತ ಸ್ವಾಗತವನ್ನು ನೀಡಿದೆ. ತಮ್ಮ ಬಲವಾದ ಪಾಲುದಾರಿಕೆಯನ್ನು ಮುಂದುವರಿಸುತ್ತಾ, ಪ್ರಧಾನಿ ನರೇಂದ್ರ ಮೋದಿ ಮತ್ತು ಅಧ್ಯಕ್ಷ ಮ್ಯಾಕ್ರನ್ ಇಂದು ಪ್ರಮುಖ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ಉಭಯ ನಾಯಕರು ಮಾರ್ಸಿಲೆಯಲ್ಲಿ ಭಾರತದ ಮೊದಲ ರಾಯಭಾರ ಕಚೇರಿಯನ್ನು ಜಂಟಿಯಾಗಿ ಉದ್ಘಾಟಿಸಲಿದ್ದಾರೆ. ಇದು ದಕ್ಷಿಣ ಫ್ರಾನ್ಸ್ ನಲ್ಲಿ ಭಾರತೀಯ ಸಮುದಾಯಕ್ಕೆ ಕಾನ್ಸುಲರ್ ಸೇವೆಗಳನ್ನು ಹೆಚ್ಚಿಸುವುದಲ್ಲದೆ ಭಾರತ-ಮಧ್ಯಪ್ರಾಚ್ಯ-ಯುರೋಪ್ ಆರ್ಥಿಕ ಕಾರಿಡಾರ್ನಲ್ಲಿ ನಿರ್ಣಾಯಕ ಪಾತ್ರ ವಹಿಸುತ್ತದೆ.

<><*<><>*><>

೨೦೨೫-೨೬ನೇ ಸಾಲಿನ ಕೇಂದ್ರ ಆಯವ್ಯದ ಮೇಲಿನ ಚರ್ಚೆ ರಾಜ್ಯಸಭೆಯಲ್ಲಿ ನಿನ್ನೆ ಪುನರಾರಂಭಿಸಿತು. ಚರ್ಚೆಯಲ್ಲಿ ಭಾಗವಹಿಸಿದ ಬಿಜೆಪಿಯ ಭಗವತ್ ಕರದ್, ಸರ್ಕಾರ ಕೈಗೊಂಡ ಪೂರ್ವಭಾವಿ ಕ್ರಮಗಳಿಂದಾಗಿ ವಿತ್ತೀಯ ಕೊರತೆಯನ್ನು ಶೇಕಡ ೦.೪ ರಷ್ಟು ಕಡಿಮೆ ಮಾಡಲಾಗಿದೆ ಎಂದು ಹೇಳಿದರು. ನೇರ ಲಾಭ ವರ್ಗಾವಣೆಯು ಸೋರಿಕೆಯನ್ನು ತಡೆಯಲು ಸಹಾಯ ಮಾಡಿದೆ ಮತ್ತು ಸರ್ಕಾರದ ಬೊಕ್ಕಸವನ್ನು ಉಳಿಸಿದೆ ಎಂದು ಅವರು ಹೇಳಿದರು. ಎನ್ ಸಿಪಿಯ ಪ್ರಫುಲ್ ಪಟೇಲ್, ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ಮುಂಬರುವ ವರ್ಷಗಳಲ್ಲಿ ದೇಶವು ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ದೃಢವಾದ ಮೂಲಸೌಕರ್ಯ ಮತ್ತು ಇತರ ಕ್ಷೇತ್ರಗಳನ್ನು ನಿರ್ಮಿಸುವಲ್ಲಿ ಭಾರತವು ಗಮನಾರ್ಹ ಪ್ರಗತಿಯನ್ನು ಕಂಡಿದೆ ಎಂದು ಅವರು ಹೇಳಿದರು.

<><*<><>*><>

ದೇಶದ ನಿವ್ವಳ ನೇರ ತೆರಿಗೆ ಸಂಗ್ರಹ ವರ್ಷದಿಂದ ವರ್ಷಕ್ಕೆ ಶೇಕಡ ೧೪.೬೯ ರಷ್ಟು ಬೆಳವಣಿಗೆಯನ್ನು ಕಂಡಿದ್ದು, ಇದು ಪ್ರಸಕ್ತ ಹಣಕಾಸು ವರ್ಷದಲ್ಲಿ ೧೭ ಲಕ್ಷ ೭೮ ಸಾವಿರ ಕೋಟಿ ರೂಪಾಯಿಗೆ ತಲುಪಿದೆ. ಕೇಂದ್ರೀಯ ನೇರ ತೆರಿಗೆ ಮಂಡಳಿ ಬಿಡುಗಡೆ ಮಾಡಿದ ಅಂಕಿಅಂಶಗಳ ಪ್ರಕಾರ, ೨೦೨೩-೨೪ರ ಹಣಕಾಸು ವರ್ಷಕ್ಕೆ ಹೋಲಿಸಿದರೆ ಒಟ್ಟು ನೇರ ತೆರಿಗೆ ಸಂಗ್ರಹವು ಶೇಕಡ ೧೯ ಕ್ಕಿಂತ ಹೆಚ್ಚು ಬೆಳವಣಿಗೆ ಕಂಡು ಬಂದಿದೆ. ವೈಯಕ್ತಿಕ ಆದಾಯ ತೆರಿಗೆ ಸಂಗ್ರಹವು ೯ ಲಕ್ಷ ೪೭ ಸಾವಿರ ಕೋಟಿ ರೂಪಾಯಿಗಳಿಗೆ ಏರಿದರೆ, ಕಾರ್ಪೋರೇಟ್ ತೆರಿಗೆ ಸಂಗ್ರಹವು ೭ ಲಕ್ಷ ೭೮ ಸಾವಿರ ಕೋಟಿ ರೂಪಾಯಿಗಳಿಗೆ ತಲುಪಿದೆ.

<><*<><>*><>

ಲಾಮ್ ರಿಸರ್ಚ್ ಭಾರತದಲ್ಲಿ ೧೦ ಸಾವಿರ ಕೋಟಿ ರೂಪಾಯಿಗಳ ಪ್ರಮುಖ ಹೂಡಿಕೆಯನ್ನು ಘೋಷಿಸಿದೆ ಎಂದು ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಈ ಸಂಬಂಧ ಸಾಮಾಜಿಕ ಮಾಧ್ಯಮ ಹಂಚಿಕೊಂಡಿರುವ ಅವರು, ವೈಷ್ಣವ್, ಇದು ಭಾರತದ ಅರೆವಾಹಕ ಪ್ರಯಾಣದಲ್ಲಿ ಮತ್ತೊಂದು ಮೈಲಿಗಲ್ಲಾಗಿದೆ. ಇದು ಪ್ರಧಾನಿ ನರೇಂದ್ರ ಮೋದಿಯವರ ಸೆಮಿಕಂಡಕ್ಟರ್ ದೃಷ್ಟಿಕೋನದಲ್ಲಿದೊಡ್ಡ ವಿಶ್ವಾಸದ ಮತವಾಗಿದೆ ಎಂದು ಅವರು ಹೇಳಿದರು. ಲ್ಯಾಮ್ ರಿಸರ್ಚ್ ಯುಎಸ್ ಮೂಲದ ಜಾಗತಿಕ ಪೂರೈಕೆದಾರನಾಗಿದ್ದು, ಅರೆವಾಹಕ ಉದ್ಯಮಕ್ಕೆ ವೇಫರ್-ಫ್ಯಾಬ್ರಿಕೇಷನ್ ಉಪಕರಣಗಳು ಮತ್ತು ಸಂಬಂಧಿತ ಸೇವೆಗಳನ್ನು ಒದಗಿಸುತ್ತದೆ. ಜನವರಿ ೧೯೮೦ ರಲ್ಲಿ ಸ್ಥಾಪನೆಯಾದ ಲ್ಯಾಮ್ ರಿಸರ್ಚ್ ಪ್ರಸ್ತುತ ವಿಶ್ವದ ಪ್ರಮುಖ ಅರೆವಾಹಕ ಕಂಪನಿಯಾಗಿದೆ.

<><*<><>*><>

ದೇಶದ ಆರ್ಥಿಕತೆಯ ಪರಿವರ್ತನೆಯಲ್ಲಿ ಕರ್ನಾಟಕ ಸದಾ ಮುಂಚೂಣಿಯಲ್ಲಿರುವ ರಾಜ್ಯವಾಗಿದೆ. ಇಂದು ದೇಶದಲ್ಲಿಯೇ ಕರ್ನಾಟಕ ಅತ್ಯಂತ ಹೂಡಿಕೆದಾರರ ಸ್ನೇಹಿ ರಾಜ್ಯವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ನಿನ್ನೆಯಿಂದ ಆರಂಭವಾದ ಜಾಗತಿಕ ಹೂಡಿಕೆದಾರರ ಇನ್ವೆಸ್ಟ್ ಕರ್ನಾಟಕ ೨೦೨೫ರ ಸಮಾವೇಶದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಸದೃಢ ನೀತಿ ನಿರೂಪಣೆ, ಸಕ್ರಿಯ ಆಡಳಿತ ಮತ್ತು ವ್ಯವಹಾರ-ಸ್ನೇಹಿ ಪರಿಸರ ವ್ಯವಸ್ಥೆಯಿದ್ದು, ಇಲ್ಲಿ ಮಾಡುವ ಪ್ರತಿ ಹೂಡಿಕೆಯೂ ಯಶಸ್ವಿಯಾಗುವಂತೆ ಹಾಗೂ ಸುಸ್ಥಿರ ಬೆಳವಣಿಗೆಗೆ ಕೊಡುಗೆ ನೀಡುವಂತೆ ಖಾತ್ರಿಪಡಿಸುತ್ತದೆ ಎಂದು ತಿಳಿಸಿದರು. ಕೃತಕ ಬುದ್ಧಿಮತ್ತೆ, ರೋಬೋಟಿಕ್ಸ್, ಸ್ಪೇಸ್ ಮತ್ತು ಬಯೋಟೆಕ್ ನಲ್ಲಿ ೪೦೦ಕ್ಕೂ ಅಧಿಕ ಹೆಚ್ಚು ಸಂಶೋಧನೆ ಮತ್ತು ಅಭಿವೃದ್ಧಿ ಕೇಂದ್ರಗಳನ್ನು ಹೊಂದಿರುವ ಕರ್ನಾಟಕ, ರಾಜ್ಯದ ಬೌದ್ಧಿಕ ಕೇಂದ್ರವಾಗಿ ತಲೆ ಎತ್ತಿದೆ ಎಂದು ಹೇಳಿದರು.

<><*<><>*><>

ಉತ್ತರಪ್ರದೇಶದ ಪ್ರಯಾಗರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭ ಮೇಳದಲ್ಲಿ ಇಂದು ಮಾಘ ಪೂರ್ಣಿಮೆಯ ವಿಶೇಷ ಅಮೃತ ಸ್ನಾನ ನಡೆಯುತ್ತಿದೆ. ಈ ದಿನವು, ಅತ್ಯಂತ ಪ್ರಶಸ್ತ್ಯವಾಗಿದ್ದು, ೧೦ ಲಕ್ಷಕ್ಕೂ ಹೆಚ್ಚು ಕಲ್ಪವಾಸಿಗಳು ಭಾಗವಹಿಸಿದ್ದಾರೆ. ಸಂಪ್ರದಾಯಗಳ ಪ್ರಕಾರ, ಮಾಘ ಪೂರ್ಣಿಮೆಯ ದಿನದಂದು ಪ್ರಯಾಗರಾಜ್‌ನ ಸಂಗಮದ ದಡದಲ್ಲಿ ವಿಶೇಷ ಆಚರಣೆಗಳನ್ನು ಕೈಗೊಳ್ಳುವುದರಿಂದ ಸಾವಿರ ವರ್ಷಗಳ ತಪಸ್ಸಿನ ಫಲ ಸಿಗುತ್ತದೆ ಎಂದು ನಂಬಿಕೆ ಇದೆ. ಮಹಾ ಕುಂಭದಲ್ಲಿ ವಿಶೇಷ ಪೂಜಾ ಕೈಂಕರ್ಯಗಳನ್ನು ಕೈಗೊಳ್ಳುವುದು ಫಲಪ್ರದವೆಂದು ಪರಿಗಣಿಸಲಾಗಿದೆ. ವಿಶ್ವದ ಅತಿದೊಡ್ಡ ಮಹಾಕುಂಭ ಮೇಳದಲ್ಲಿ ಇಲ್ಲಿಯವರೆಗೆ ೪೬ ಕೋಟಿಗೂ ಹೆಚ್ಚು ಭಕ್ತರು ತ್ರಿವೇಣಿ ಸಂಗಮದಲ್ಲಿ ಪವಿತ್ರ ಸ್ನಾನ ಮಾಡಿದ್ದಾರೆ.

<><*<><>*><>

ಚಳಿಗಾಲದ ಸಮಯದಲ್ಲಿ ಕಸ ಸುಡುವುದನ್ನು ನಿರುತ್ಸಾಹಗೊಳಿಸಲು ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆ (ಎಂಎಸ್ ಪಿ) ಯಂತೆಯೇ ಭತ್ತದ ಉಳಿಕೆಗೆ ಕನಿಷ್ಠ ಬೆಲೆಯನ್ನು ನಿರ್ಧರಿಸುವ ಕಾರ್ಯವಿಧಾನವನ್ನು ಸ್ಥಾಪಿಸಲು ಸಂಸದೀಯ ಸಮಿತಿ ಶಿಫಾರಸು ಮಾಡಿದೆ. ನಿನ್ನೆ ರಾಜ್ಯಸಭೆಯಲ್ಲಿ ಮಂಡಿಸಲಾದ ತನ್ನ ವರದಿಯಲ್ಲಿ, ಅಧೀನ ಶಾಸನದ ಸಮಿತಿಯು ಈ ಮಾನದಂಡ ಬೆಲೆಗಳನ್ನು ಮುಂಗಾರು ಋತುವಿಗೆ ಮುನ್ನ ವಾರ್ಷಿಕವಾಗಿ ಪರಿಶೀಲಿಸಬೇಕು ಮತ್ತು ಸೂಚಿಸಬೇಕು ಎಂದು ಸೂಚಿಸಿದೆ. ಪ್ರತಿಕೂಲ ಹವಾಮಾನ ಪರಿಸ್ಥಿತಿಗಳು, ವಾಹನ ಹೊರಸೂಸುವಿಕೆ, ಕಸ ಸುಡುವಿಕೆ, ಪಟಾಕಿಗಳು ಮತ್ತು ಇತರ ಸ್ಥಳೀಯ ಮಾಲಿನ್ಯ ಮೂಲಗಳೊಂದಿಗೆ ಸೇರಿ ಚಳಿಗಾಲದಲ್ಲಿ ದೆಹಲಿ-ಎನ್ ಸಿಆರ್ ನಲ್ಲಿ ಅಪಾಯಕಾರಿ ಗಾಳಿಯ ಗುಣಮಟ್ಟದ ಮಟ್ಟಕ್ಕೆ ಕಾರಣವಾಗುತ್ತವೆ. ಪಂಜಾಬ್ ಮತ್ತು ಹರಿಯಾಣದಲ್ಲಿ ಹೆಚ್ಚಿನ ಕಸ ಸುಡುವ ಘಟನೆಗಳು ಸಂಭವಿಸುತ್ತವೆ ಎಂದು ಸೂಚಿಸಲಾಗಿದೆ.

<><*<><>*><>

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಇಂದು ಮಧ್ಯಾಹ್ನ ನಡೆಯಲಿರುವ ೩ ಪಂದ್ಯಗಳ ಏಕದಿನ ಸರಣಿಯ ಅಂತಿಮ ಪಂದ್ಯದಲ್ಲಿ ಭಾರತ ಮತ್ತು ಇಂಗ್ಲೆಂಡ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೧.೩೦ಕ್ಕೆ ಆರಂಭವಾಗಲಿದೆ. ಈಗಾಗಲೇ ಸರಣಿಯನ್ನು ೨-೦ ಮುನ್ನಡೆಯೊಂದಿಗೆ ಗೆದ್ದುಕೊಂಡಿರುವ ಆತಿಥೇಯರು, ಇಂದಿನ ಪಂದ್ಯವನ್ನು ಸಹ ಗೆದ್ದು ಸರಣಿಯನ್ನು ಕ್ಲೀನ್ ಸ್ವೀಪ್ ಮಾಡುವ ಗುರಿಯನ್ನು ಹೊಂದಿದ್ದಾರೆ. ಸರಣಿಯುದ್ದಕ್ಕೂ ಟೀಮ್ ಇಂಡಿಯಾ ಉತ್ತಮ ಫಾರ್ಮ್ ನಲ್ಲಿದ್ದು, ಮೊದಲ ಎರಡು ಏಕದಿನ ಪಂದ್ಯಗಳಲ್ಲಿ ತಲಾ ನಾಲ್ಕು ವಿಕೆಟ್ ಗಳ ಗೆಲುವು ದಾಖಲಿಸಿದೆ. ಕಟಕ್ ನಲ್ಲಿ ನಡೆದ ಕೊನೆಯ ಏಕದಿನ ಪಂದ್ಯದಲ್ಲಿ

ನಾಯಕ ರೋಹಿತ್ ಶರ್ಮಾ ಶತಕದೊಂದಿಗೆ ಫಾರ್ಮ್ ಗೆ ಮರಳಿದ್ದಾರೆ. ಆದರೆ ವಿರಾಟ್ ಕೊಹ್ಲಿ ರನ್ ಗಳಿಸಲು ತಿಣುಕಾಡುತ್ತಿದ್ದಾರೆ. ಚಾಂಪಿಯನ್ಸ್ ಟ್ರೋಫಿಗೂ ಮುನ್ನ ಸೂಕ್ತ ಸಂಯೋಜನೆ ಕಂಡುಕೊಳ್ಳಲು ಭಾರತ ತಂಡ ಎದುರು ನೋಡುತ್ತಿದೆ.

<><*<><>*><>

ಬೆನ್ನುನೋವಿನಿಂದಾಗಿ ಭಾರತದ ಸ್ಟಾರ್ ವೇಗಿ ಜಸ್ ಪ್ರಿತ್ ಬುಮ್ರಾ  ಮುಂಬರುವ ಐಸಿಸಿ ಚಾಂಪಿಯನ್ಸ್ ಟ್ರೋಫಿ ೨೦೨೫ ರಿಂದ ಹೊರಗುಳಿದಿದ್ದಾರೆ. ಬುಮ್ರಾ ಬದಲಿಗೆ ಹರ್ಷಿತ್ ರಾಣಾ ಅವರನ್ನು ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ-ಬಿಸಿಸಿಐ ಆಯ್ಕೆ ಮಾಡಿದೆ. ಇಂಗ್ಲೆಂಡ್ ವಿರುದ್ಧ ನಡೆಯುತ್ತಿರುವ ಏಕದಿನ ಸರಣಿಯಲ್ಲಿ, ರಾಣಾ ತಮ್ಮ ಮೊದಲ ಎರಡು ಪಂದ್ಯಗಳಲ್ಲಿ ನಾಲ್ಕು ವಿಕೆಟ್ ಗಳನ್ನು ಪಡೆದಿದ್ದಾರೆ. ಟೀಮ್ ಇಂಡಿಯಾ ತಂಡದಲ್ಲಿ ಸ್ಪಿನ್ನರ್ ವರುಣ್ ಚಕ್ರವರ್ತಿ ಕೂಡ ಸ್ಥಾನ ಪಡೆದಿದ್ದಾರೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>**